ದಿನಾಂಕಃ **13-02-2025** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದ ಃ**

ಸಾಕ್ಷಿಯು ತನ್ನ ಮುಖ್ಯ ವಿಚಾರಣೆಯ ಪ್ರತಿಜ್ಞಾಪತ್ರ ಸಲ್ಲಿಸಿದ್ದು ಅದರಲ್ಲಿ ಬರೆದ ವಿಷಯವೆಲ್ಲಾ ಸತ್ಯವಾಗಿರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದೆಂದು ಪ್ರಮಾಣಿಸಿ ಹೇಳಿರುತ್ತಾರೆ.

1) ಅರ್ಜಿದಾರರು ಜೆ ಎಸ್ ಎಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡ ಬಗ್ಗೆ ಕೇ-ಷೀಟ್ ದಾಖಲಾತಿಗಳನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಗಳನ್ನು ಒಟ್ಟಾಗಿ ನಿಪಿ 19 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ಎದುರುದಾರರ ಪರ ಶ್ರೀ ಸಿ ಡಿ ಎಂ ವಕೀಲರಿಂದ,

1) ಅರ್ಜಿದಾರರು ಚಿಕಿತ್ಸೆ ಪಡೆಯುವ ಪೂರ್ವದಲ್ಲಿ ಇಎಸ್ಐ ಆಸ್ಪತ್ರೆಯಿಂದ ಚಿಕಿತ್ಸಾ ಹಣ ವನ್ನು ಸಂಪೂರ್ಣವಾಗಿ ಪಾವತಿ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಅರ್ಜಿದಾರರಿಗೆ ಪ್ರಥಮ ಚಿಕಿತ್ಸೆಯನ್ನು ಎಎಸ್ಐ ಆಸ್ಪತ್ರೆಯ ವೈದ್ಯಾಧಿಕಾರಿಯಾದ ಶ್ರೀಮತಿ ಲಕ್ಷ್ಮೀ ರವರು ಮಾಡಿರುತ್ತಾರೆ ಎಂದರೆ ಸರಿ. ನಾನು ಹಾಜರುಪಡಿಸಿರುವ ದಾಖಲೆ ಪ್ರಕಾರ ಜೆ ಎಸ್ ಎಸ್ ವೈದ್ಯಾಧಿಕಾರಿಯಾದ ಬಿ ಆರ್ ಶಿವಾನಂದ ರವರು ಅರ್ಜಿದಾರರನ್ನು ಪರಿಶೀಲಿಸಿರುತ್ತಾರೆ ಎಂದರೆ ಸರಿ. ಅರ್ಜಿದಾರರಿಗೆ ರೆಡಿಯಾಲಜಿ ವಿಭಾಗದವರು ಎಕ್ಸ್ ರೇ ತೆಗೆದಿರುತ್ತಾರೆ ಎಂದರೆ ಸರಿ.

2) ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಗಾಯಗಳಿಗೆ ನಾನು ಚಿಕಿತ್ಸೆ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ನಾನು ಹೇಳಿದ ರೀತಿಯಲ್ಲಿ ಒಟ್ಟಾರೆಯಾಗಿ 22.77 ಅಂಗ ನ್ಯೂನ್ಯತೆ ಆಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಅರ್ಜಿದಾರರಿಗೆ 04-08-2021 ರಂದು ಶಸ್ತ್ರ ಚಿಕಿತ್ಸೆ ಮಾಡಿರುತ್ತೇನೆ. ನಾನು ಮಾಡಿದ

ಶಸ್ತ್ರ ಚಿಕಿತ್ಸೆ ಅರ್ಜಿದಾರರಿಗೆ ಯಶಸ್ವಿಯಾಗಿರುತ್ತದೆ ಎಂದರೆ ಸರಿ. ನಾನು ಇತ್ತೀಚೆಗೆ 06-02-2025 ರಂದು ಅರ್ಜಿದಾರರಿಗೆ ಎಕ್ಸ್ ರೇ ಮಾಡಿಸಿರುತ್ತೇನೆ. ಆ ಸಮಯದಲ್ಲಿ ಅರ್ಜಿದಾರರಿಗೆ ಬಲಕಾಲಿನಲ್ಲಿ implant ಇನ್ನೂ ಇರುವುದು ಕಂಡು ಬಂದಿರುತ್ತದೆ. ನಾನು 04-08-2021 ರಂದು ಅರ್ಜಿದಾರರಿಗೆ ಶಸ್ತ್ರ ಚಿಕಿತ್ಸೆ ಮಾಡುವ ಕಾಲಕ್ಕೆ implant ಮಾಡಿರುವ ಬಗ್ಗೆ ನಮೂದು ಇರುವುದಿಲ್ಲ ಎಂದರೆ ಸರಿಯಲ್ಲ.

3) ಅರ್ಜಿದಾರರಿಗೆ ಆಗಿರುವ ಗಾಯಗಳು ಅಪಘಾತದಿಂದ ಆಗಿರುವ ಗಾಯಗಳಾಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ವೈದ್ಯಾಧಿಕಾರಿಯಾದ ಶಿವಾನಂದ ಮತ್ತು ಶ್ರೀಮತಿ ಲಕ್ಷ್ಮೀ ರವರ ಅಭಿಪ್ರಾಯಕ್ಕೆ ವಿರುದ್ಧವಾಗಿ ವರದಿ ನೀಡಿರುತ್ತೇನೆ ಎಂದರೆ ಸರಿಯಲ್ಲ. ಅರ್ಜಿದಾರರು ಚಿಕಿತ್ಸೆ ನಂತರ ತನ್ನ ದೈನಂದಿನ ಕೆಲಸ ಮಾಡಲು ಶಕ್ತನಾಗಿರುತ್ತಾನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ.